I/281140/2022

ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ:42(27)-3-1:ಆರ್‌ಆರ್‌ಸಿ:21
(ಇ-531061)

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ, ಬೆಂಗಳೂರು,
ದಿನಾಂಕ: 06.07.2022

**ತಿದ್ದುಪಡಿ ಆದೇಶ**

**ವಿಷಯ:** 2021-22 ನೇ ಸಾಲಿನ ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಮಂಜೂರಾತಿ ಕಾರ್ಯಕ್ರಮದಡಿ ಉಡುಪಿ ಜಿಲ್ಲೆಯ ಬೈಂದೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಮಂಜೂರಾತಿ ನೀಡಿದ ರಸ್ತೆ ಕಾಮಗಾರಿಗಳನ್ನು ಬದಲಾವಣೆ ಮಾಡುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ:42(27)-3: ಆರ್‌ಆರ್‌ಸಿ:2021 (ಇ-531061), ದಿನಾಂಕ: 07.01.2022.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಉಡುಪಿ ರವರ ಪತ್ರ ಸಂಖ್ಯೆ: ಉಜಿಪಂ:ಅಭಿವೃದ್ದಿ:ಸಿಆರ್ :E75544:2022-23 ದಿನಾಂಕ:28.06.2022.

********

ಓದಲಾದ-1 ರ ಆದೇಶದಲ್ಲಿ 2021-22ನೇ ಸಾಲಿನಲ್ಲಿ ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಮಂಜೂರಾತಿ ಕಾರ್ಯಕ್ರಮದಡಿ ಉಡುಪಿ ಜಿಲ್ಲೆಯ ಬೈಂದೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ರೂ. 10.00 ಕೋಟಿಗಳ ಮೊತ್ತದಲ್ಲಿ 25 ರಸ್ತೆ ಕಾಮಗಾರಿಗಳನ್ನು ಪಂಚಾಯತ್ ರಾಜ್ ಇಂಜನಿಯರಿಂಗ್ ಇಲಾಖೆ ಮೂಲಕ ಅನುಷ್ಠಾನ ಮಾಡಲು ಆದೇಶ ಹೊರಡಿಸಲಾಗಿರುತ್ತದೆ.

ಓದಲಾದ -2 ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಉಡುಪಿ ರವರು ಆದೇಶ ಹೊರಡಿಸಲಾಗಿದ್ದ 25 ರಸ್ತೆ ಕಾಮಗಾರಿಗಳ ಪೈಕಿ 2 ಕಾಮಗಾರಿಗಳನ್ನು ಕೆಳಕಂಡಂತೆ ಬದಲಾವಣೆ ಮಾಡಲು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

| ಕ್ರ.ಸಂ. | ಅನುಮೋದನೆ ಕಾಮಗಾರಿಯ ಹೆಸರು | ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ) | ಬದಲಾವಣೆ ಕಾಮಗಾರಿ | ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|---|---|
| 8 | ಬೈಂದೂರು ವಿಧಾನಸಭಾ ಕ್ಷೇತ್ರದ ಪಡುವರಿ ಗ್ರಾಮ ಪಂಚಾಯತಿನ ಜೋಗುರು ಶಂಕರನಾರಾಯಣ ದೇವಸ್ಥಾನಕ್ಕೆ ಹೋಗುವ ರಸ್ತೆ ಅಭಿವೃದ್ಧಿ | 35.00 | ವಂಡ್ಸೆ ಗ್ರಾಮ ಪಂಚಾಯತಿನ ದಿನಕರ ಉಡುಪರ ಮನೆಗೆ ಹೋಗುವ ರಸ್ತೆ ಅಭಿವೃದ್ದಿ | 10.00 |
| | | | ಉಳ್ಳೂರು-74 ಗ್ರಾಮ ಪಂಚಾಯತ್ ವ್ಯಾಪ್ತಿಯ ಉಳ್ಳೂರು ಕ್ರಾಸ್ ನಿಂದ ಕಾರಿಬೈಲುವಿಗೆ ಹೋಗುವ ರಸ್ತೆ ಅಭಿವೃದ್ದಿ | 25.00 |
| 11 | ಬೈಂದೂರು ವಿಧಾನಸಭಾ ಕ್ಷೇತ್ರದ ಬೈಂದೂರು ಗ್ರಾಮ ಪಂಚಾಯತ್ ವ್ಯಾಪ್ತಿಯ ಗೋಳಿಬೇರು ಎಬಲ್ಲಿ ಸೇತುವೆ ಸಹಿತ ರಸ್ತೆ ಅಭಿವೃದ್ದಿ | 20.00 | ಕೊಲ್ಲೂರು ಗ್ರಾಮ ಗ್ರಾಮ ಪಂಚಾಯತ್ ನ ಧರ್ಮಪೀಠಕ್ಕೆ ಹೋಗುವ ರಸ್ತೆ ಅಭಿವೃದ್ದಿ | 20.00 |

ಮೇಲಿನ ಕೋಷ್ಠಕದಲ್ಲಿರುವಂತೆ ರಸ್ತೆ ಕಾಮಗಾರಿಗಳನ್ನು ಕೆಳಕಂಡ ಷರತ್ತಿಗೊಳಪಟ್ಟು ಬದಲಾವಣೆ ಮಾಡಲು ಸರ್ಕಾರವು ಅನುಮೋದಿಸಿದ್ದು, ಉಳಿದಂತೆ ಈ ಹಿಂದೆ ಹೊರಡಿಸಿರುವ ಆದೇಶದಲ್ಲಿ ಯಾವುದೇ ಬದಲಾವಣೆಯಿರುವುದಿಲ್ಲ.

I/281140/2022

**ಷರತ್ತುಗಳು:**

1. ಒದಲಾದ-1 ರ ಆದೇಶದಲ್ಲಿ ಈಗಾಗಲೇ ಮಂಜೂರಾತಿ ನೀಡಿದ ರಸ್ತೆ ಕಾಮಗಾರಿಗಳು ಆರಂಭಗೊಳ್ಳದಿರುವುದನ್ನು ಖಚಿತಪಡಿಸಿಕೊಳ್ಳತಕ್ಕದ್ದು, ಒಂದೊಮ್ಮೆ ಕಾಮಗಾರಿಗಳು ಪ್ರಾರಂಭಿಸಿದ್ದಲ್ಲಿ ಬದಲಾದ ಕಾಮಗಾರಿಯನ್ನು ಆರಂಭಿಸಿತಕ್ಕದ್ದಲ್ಲ.
2. ಹೊಸದಾಗಿ ಬದಲಾವಣೆಯ ಮಂಜೂರಾತಿಗೆ ಕೋರಿರುವ ರಸ್ತೆ ಕಾಮಗಾರಿಯು ಡಿಆರ್‌ಆರ್‌ಪಿ ಪಟ್ಟಿಯಲ್ಲಿರತಕ್ಕದ್ದು.
3. ಈ ಕಾಮಗಾರಿಗಳು ಇನ್ನಾವುದೇ ಯೋಜನೆಯಲ್ಲಿ ಅಭಿವೃದ್ಧಿ ತೆಗೆದುಕೊಂಡಿರಬಾರದು ಮತ್ತು ಪುನರಾವರ್ತನೆಯಾಗಿರತಕ್ಕದ್ದಲ್ಲ. ಕಾಮಗಾರಿಗಳ ಪುನರಾವರ್ತನೆಯಲ್ಲಿ ವ್ಯತ್ಯಾಸವಿದ್ದರೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳೇ ಜವಾಬ್ದಾರಿಯಾಗುತ್ತಾರೆ.
4. ಮತ್ತೆ ಮತ್ತೆ ಬದಲಾವಣೆಗೆ ಪ್ರಸ್ತಾವನೆಯನ್ನು ಸಲ್ಲಿಸತ್ತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶದನುಸಾರ
ಮತ್ತು ಅವರ ಹೆಸರಿನಲ್ಲಿ

**Signed by Ravikumar**
**Date: 06-07-2022 16:24:43**

N. — 06/07/2022

**(ಎನ್.ರವಿಕುಮಾರ್)**
ಉಪ ನಿರ್ದೇಶಕರು, ಗ್ರಾಮೀಣಾಭಿವೃದ್ಧಿ
ಹಾಗೂ ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಪ್ರತಿಯನ್ನು:

1. ಮಹಾಲೇಖಪಾಲರು (ಲೆಕ್ಕ ಪತ್ರ), ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಆಡಿಟ್-1), ಕರ್ನಾಟಕ , ಬೆಂಗಳೂರು.
3. ಮಹಾಲೇಖಪಾಲರು (ಆಡಿಟ್-2), ಕರ್ನಾಟಕ, ಬೆಂಗಳೂರು.
4. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
5. ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (PMU) (IF), 5ನೇ ಹಂತ, ಬಹುಮಹಡಿಗಳ ಕಟ್ಟಡ ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
9. ವಿಶೇಷಾಧಿಕಾರಿಗಳು (ಜಿಪಂ) ಮತ್ತು ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
10. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
11. ನಿರ್ದೇಶಕರು,ಖಜಾನೆ ಇಲಾಖೆ, ಬೆಂಗಳೂರು.
12. ಉಪ ನಿರ್ದೇಶಕರು, ನೆಟ್ ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್ , ಟ್ರೆಜರಿ ಡಿಪಾರ್ಟ್ ಮೆಂಟ್, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
13. ಅಧೀನ ಕಾರ್ಯದರ್ಶಿಗಳು (ವೆಚ್ಚ-6), ಜಿ.ಪಂ. ಆರ್ಥಿಕ ಇಲಾಖೆ , ವಿಧಾನಸೌಧ, ಬೆಂಗಳೂರು.
14. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು

I/281140/2022

15. ವ್ಯವಸ್ಥಾಪಕ ನಿರ್ದೇಶಕರು, ಕೆಆರ್‌ಐಡಿಎಲ್, ಬೆಂಗಳೂರು
16. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಉಡುಪಿ ಜಿಲ್ಲಾ ಪಂಚಾಯತಿ.
17. ಮಾಹಿತಿ ಕೇಂದ್ರದ ಗಣಕ ಕೋಶ ಮುಖ್ಯಸ್ಥರು, ಗ್ರಾಅಪಂರಾ ಇಲಾಖೆ ಇವರಿಗೆ ಇಲಾಖೆಯ ವೆಬ್‌ಸೈಟ್‌ನಲ್ಲಿ ಅಳವಡಿಸಲು
18. ಅಂತರ್ಜಾಲದಲ್ಲಿ ಅಳವಡಿಸಲು ಹಾಗೂ ಗ್ರೂಪ್ ಮೈಲ್ ನಲ್ಲಿ ರವಾನಿಸಲು ಸೂಚಿಸಿದೆ.
19. ರಕ್ಷಾ ಕಡತ/ ಹೆಚ್ಚುವರಿ ಪ್ರತಿ.